**ಕರ್ನಾಟಕ ಸರ್ಕಾರ**
ಪಂಚಾಯತ್ ರಾಜ್ ಆಯುಕ್ತಾಲಯ
ಕಾಳಿದಾಸ ರಸ್ತೆ, ಗಾಂಧಿನಗರ ಬೆಂಗಳೂರು – 560 009.

ಸಂಖ್ಯೆ:ಕಪಂರಾ/ಅಭಿವೃದ್ಧಿ/712/2023 ದಿನಾಂಕ:16.03.2024

# ಸುತ್ತೋಲೆ

ವಿಷಯ: ವಿಶೇಷ ಚೇತನರಿಗೆ ವ್ಯಾಸಂಗ ಮಾಡಲು ಅಥವಾ ಉದ್ಯೋಗ ಕೈಗೊಳ್ಳಲು ಪ್ರಯಾಣ ಮಾಡಲು ಯಂತ್ರಚಾಲಿತ ದ್ವಿಚಕ್ರ ವಾಹನ ಒದಗಿಸುವ ಕುರಿತು

ಉಲ್ಲೇಖ: 1. ಸರ್ಕಾರಿ ಆದೇಶ ಸಂಖ್ಯೆ:ಮಮಇ 111 ಪಿಎಚ್‌ಪಿ 2014, ದಿನಾಂಕ: 04.07.2014

2. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಪಂರಾ 254 ಜಿಪಸ 2020, ದಿನಾಂಕ:18.09.2020

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಸರ್ಕಾರಿ ಆದೇಶ ಹಾಗೂ ಉಲ್ಲೇಖ (2) ರ ಸರ್ಕಾರದ ಸುತ್ತೋಲೆಯಲ್ಲಿ ವಿಕಲಚೇತನರ ಕಲ್ಯಾಣಕ್ಕೆ ಸಂಬಂಧಿಸಿದಂತೆ, ವಿಶೇಷ ಚೇತನರಿಗೆ ವ್ಯಾಸಂಗ ಮಾಡಲು ಅಥವಾ ಉದ್ಯೋಗ ಕೈಗೊಳ್ಳಲು ಪ್ರಯಾಣ ಮಾಡುವ ಉದ್ದೇಶದಿಂದ ಶೇ.5ರ ಅನುದಾನದಲ್ಲಿ ಷರತ್ತುಗಳಿಗೆ ಒಳಪಟ್ಟು ಯಂತ್ರಚಾಲಿತ ದ್ವಿಚಕ್ರ ವಾಹನ ನೀಡಲು ಅವಕಾಶ ಕಲ್ಪಿಸಲಾಗಿರುತ್ತದೆ.

ಅದರಂತೆ, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿಗಳು ರಾಜ್ಯ ಹಣಕಾಸು ಆಯೋಗದ ಅನುದಾನ, ಸ್ವಂತ ಸಂಪನ್ಮೂಲ ಹಾಗೂ ವಿಶೇಷಚೇತನರಿಗೆ ಶೇ.5ರಷ್ಟು ವೈಯಕ್ತಿಕ ಸೌಲಭ್ಯವನ್ನು ಒದಗಿಸಲು ಅನುದಾನ ಮೀಸಲಿಡಲು ಅವಕಾಶವಿರುವ ಇತರೇ ಯಾವುದೇ ಯೋಜನೆ/ಅನುದಾನ ಗಳಲ್ಲಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ವಿಶೇಷಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ ನೀಡಲು ಅವಕಾಶ ಕಲ್ಪಿಸಲಾಗಿದೆ.

1. ವಿಕಲಚೇತನ ವ್ಯಕ್ತಿಗಳು ಭಾರತದ ಪ್ರಜೆಯಾಗಿದ್ದು, ಕರ್ನಾಟಕದಲ್ಲಿ ಕನಿಷ್ಠ 10 ವರ್ಷಗಳು ವಾಸವಾಗಿರಬೇಕು. 20 ರಿಂದ 60 ರ ವಯೋಮಾನ ತೀವ್ರತರನಾದ ದೈಹಿಕ ವಿಕಲಚೇತನರಿಗೆ ಮಾತ್ರ ಜೀವಿತ ಕಾಲದಲ್ಲಿ 1 ಬಾರಿ ಮಾತ್ರ ಸೌಲಭ್ಯ ಕಲ್ಪಿಸಲಾಗಿದೆ.
2. ಈ ಯೋಜನೆ ಸೌಲಭ್ಯ ಪಡೆಯಲು ಕುಟುಂಬ ವಾರ್ಷಿಕ ಆದಾಯ ₹ 2.00 ಲಕ್ಷಗಳಿಗಿಂತ ಕಡಿಮೆ ಇರಬೇಕು.
3. ಅಂಗವಿಕಲರ ಅಧಿನಿಯಮದಲ್ಲಿ ಸೂಚಿಸಿರುವ ಹಾಗೂ ವೈದ್ಯಕೀಯ ಪ್ರಾಧಿಕಾರದಿಂದ ನೀಡಿರುವ ಗುರುತಿನ ಚೀಟಿಯೊಂದಿಗೆ ದೃಢೀಕೃತ ವೈದ್ಯಕೀಯ ಪ್ರಮಾಣ ಪತ್ರ ಸಲ್ಲಿಸಬೇಕು.
4. ಅಪಘಾತ, ಅನಾರೋಗ್ಯ ಅಥವಾ ಹುಟ್ಟಿನಿಂದ ಒಂದು ಅಥವಾ ಎರಡು ಕಾಲುಗಳನ್ನು ಕಳೆದುಕೊಂಡ ಅಥವಾ ಸ್ವಾಧೀನ ಇಲ್ಲದಿರುವ ಅಂಗವೈಕಲ್ಯತೆಯ ಪ್ರಮಾಣ ಶೇ. 75ಕ್ಕಿಂತ ಹೆಚ್ಚು ಇದ್ದು, ಎರಡು ಕೈಗಳು ಸ್ವಾಧೀನವಾಗಿರುವ ಮತ್ತು ಇತರೆ ಎಲ್ಲಾ ರೀತಿಯಲ್ಲಿ ದೈಹಿಕವಾಗಿ ಸದೃಢವಾಗಿರುವ ವಿಶೇಷಚೇತನರಿಗೆ ಪ್ರಥಮ ಆದ್ಯತೆ ನೀಡುವುದು.

5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ರವರ ಅಧ್ಯಕ್ಷತೆಯಲ್ಲಿ ಜಿಲ್ಲಾ ವೈದ್ಯಾಧಿಕಾರಿ, ಆರೋಗ್ಯ ಇಲಾಖೆ, ಪ್ರಾದೇಶಿಕ ಸಾರಿಗೆ ಅಧಿಕಾರಿ, ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಅಂಗವಿಕಲರ ಕಲ್ಯಾಣ ಅಧಿಕಾರಿ ಹಾಗೂ ದೈಹಿಕ ವಿಕಲಚೇತನರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಒಂದು ಸ್ವಯಂ ಸೇವಾ ಸಂಸ್ಥೆಯ ಮುಖ್ಯಸ್ಥರ ಸಮಿತಿಯ ಮೂಲಕ ಫಲಾನುಭವಿಗಳನ್ನು ಆಯ್ಕೆ ಮಾಡುವುದು.
6. ಯಂತ್ರ ಚಾಲಿತ ದ್ವಿಚಕ್ರ ವಾಹನವನ್ನು ಅವರ ಜೀವಿತಾವಧಿಯಲ್ಲಿ ಯಾವುದೇ ಕಾರಣಕ್ಕೆ ಪರಭಾರೆ ಮಾಡಬಾರದು, ಮಾಡಿದ್ದು ಕಂಡುಬಂದಲ್ಲಿ ಅಂತಹವರ ಮೇಲೆ ಕಾನೂನು ಕ್ರಮ ಜರುಗಿಸಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.
7. ಈ ಸೌಲಭ್ಯ ಪಡೆಯಲಿಚ್ಛಿಸುವ ವಿಕಲಚೇತನರು ದ್ವಿಚಕ್ರ ವಾಹನ ಚಾಲನೆ ಮಾಡುವ ಪರವಾನಗಿ ಪತ್ರ ಪಡೆದಿರಬೇಕು.
8. ವಿಕಲಚೇತನರಿಗೆ ನೀಡುವ ದ್ವಿಚಕ್ರ ವಾಹನವನ್ನು ಸಾರಿಗೆ ಇಲಾಖೆಯಿಂದ ನೋಂದಣಿ ಮಾಡಿಸಿ ನೀಡಬೇಕು. ಆರ್.ಸಿ. ಪುಸ್ತಕದ ಪ್ರತಿಯನ್ನು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ನೀಡಬೇಕು ಹಾಗೂ ಆರ್.ಸಿ ಪುಸ್ತಕದಲ್ಲಿ "ಫಲಾನುಭವಿ ಜೀವಿತವಾಗಿರುವವರೆಗೆ ಸರ್ಕಾರ ಮಂಜೂರು ಮಾಡಿರುವ ವಾಹನ ಮರು ಮಾರಾಟ ಮತ್ತು ವರ್ಗಾವಣೆ ಮಾಡುವಂತಿಲ್ಲ " ಎಂದು ನಮೂದಿಸಬೇಕು.

**ಆಯುಕ್ತರು,**
ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,
ಬೆಂಗಳೂರು.

ಇವರಿಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು (ಮು.ಕಾ.ನಿ.ಅ., ಜಿ.ಪಂ. ರವರ ಮುಖಾಂತರ)
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ಕಾ.ನಿ.ಅ., ತಾ.ಪಂ. ರವರ ಮುಖಾಂತರ)

ಪ್ರತಿಯನ್ನು:

1. ಆರ್ಥಿಕ ಅಧಿಕಾರಿ, ಲೆಕ್ಕಪತ್ರ ಶಾಖೆ, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಹೆಚ್ಚುವರಿ ಪ್ರತಿ ಶಾಖಾ ರಕ್ಷಾ ಕಡತ.